All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

14.04.2026 13.10 hrs

<>><><*><><<>

ಮುಖ್ಯಾಂಶಗಳು

- ಡೆಹರಾಡೂನ್‌ನಲ್ಲಿ ೨೧೩ ಕಿಲೋಮೀಟರ್ ಉದ್ದದ ಆರ್ಥಿಕ ಕಾರಿಡಾರ್ ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ
- ವಿಕಸಿತ ಭಾರತ ಸಂಕಲ್ಪ ಸಾಕಾರಕ್ಕೆ ಸಕ್ರಿಯ ಮಹಿಳಾ ಪಾಲ್ಗೊಳ್ಳುವಿಕೆ ಅಗತ್ಯ - ಪತ್ರದ ಮುಖೇನ ಪ್ರಧಾನಿ ಅಭಿಮತ
- ಅಂಬೇಡ್ಕರ್ ಜಯಂತಿ ಹಿನ್ನೆಲೆ ; ಸಂವಿಧಾನ ಶಿಲ್ಪಿಗೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿಯವರಿಂದ ಗೌರವ ನಮನ
- ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳಿಂದ ಪ್ರಚಾರ ಕಾರ್ಯ ಬಿರುಸು
- ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಚೆನ್ನೈ ಸೂಪರ್ ಕಿಂಗ್ಸ್-ಕೊಲ್ಕತ್ತಾ ನೈಟ್ ರೈಡರ್ಸ್ ಸೆಣಸು

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ಇಂದು 'ದೆಹಲಿ-ಡೆಹ್ರಾಡೂನ್ ಆರ್ಥಿಕ ಕಾರಿಡಾರ್' ಅನ್ನು ಉದ್ಘಾಟಿಸಲಿದ್ದಾರೆ. ಪ್ರಧಾನಿಯವರು ಕಾರಿಡಾರ್‌ನ ಎಲಿವೇಟೆಡ್ ವಿಭಾಗದಲ್ಲಿ ನಿರ್ಮಿಸಲಾಗಿರುವ ವನ್ಯಜೀವಿ ಕಾರಿಡಾರ್ ಅನ್ನು ಪರಿಶೀಲಿಸಿದರು. ಇದಕ್ಕೂ ಮುನ್ನ ಡೆಹ್ರಾಡೂನ್ ಸಮೀಪವಿರುವ ಜೈ ಮಾ ದಾತ್ ಕಾಳಿ ದೇವಾಲಯಕ್ಕೆ ಇಂದು ಭೇಟಿ ನೀಡಿದ ಪ್ರಧಾನಿ, ದೇವಿದರ್ಶನ ಪಡೆದು, ಪೂಜೆ ಸಲ್ಲಿಸಿದರು. ಉತ್ತರಪ್ರದೇಶದ ಸಹಾರನಪುರದಲ್ಲಿ ರೋಡ್ ಶೋ ನಡೆಸಿದ ಪ್ರಧಾನಿ ಅವರಿಗೆ ಸ್ಥಳೀಯ ಜನತೆ ಆತ್ಮೀಯವಾಗಿ ಸ್ವಾಗತಿಸಿತು. ಸುಮಾರು ೧೨ ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ನಿರ್ಮಿಸಲಾಗಿರುವ ೨೧೩ ಕಿಲೋಮೀಟರ್ ಉದ್ದದ ಷಟ್‌ಪಥ 'ದೆಹಲಿ-ಡೆಹ್ರಾಡೂನ್ ಆರ್ಥಿಕ ಕಾರಿಡಾರ್' ದೆಹಲಿ ಮತ್ತು ಡೆಹ್ರಾಡೂನ್ ನಡುವಿನ ಪ್ರಯಾಣದ ಸಮಯವನ್ನು ಪ್ರಸ್ತುತ ಇರುವ ೬

ಗಂಟೆಗಳಿಂದ ಕೇವಲ ಎರಡೂವರೆ ಗಂಟೆಗಳಿಗೆ ಇಳಿಸಲಿದೆ. ಈ ಯೋಜನೆಯು ೧೦ ಇಂಟರ್‌ಚೇಂಜ್‌ಗಳು, ಮೂರು ರೈಲ್ವೆ ಮೇಲ್ಸೇತುವೆಗಳು, ನಾಲ್ಕು ಪ್ರಮುಖ ಸೇತುವೆಗಳು ಮತ್ತು ೧೨ ವೇಸೈಡ್ ಸೌಲಭ್ಯಗಳನ್ನು ಒಳಗೊಂಡಿದ್ದು, ಸುಗಮ ಮತ್ತು ವೇಗದ ಸಂಪರ್ಕವನ್ನು ಕಲ್ಪಿಸಲಿದೆ.

<>><><*><><<>

ಮಹಿಳೆಯರು ನೀತಿ ನಿರೂಪಣೆ ಮತ್ತು ನಿರ್ಧಾರ ತೆಗೆದುಕೊಳ್ಳುವಲ್ಲಿ ಸಕ್ರಿಯವಾಗಿ ಭಾಗವಹಿಸಿದಾಗ, ೨೦೪೭ರ ವೇಳೆಗೆ ವಿಕಸಿತ ಭಾರತದೆಡೆಗಿನ ಪಯಣ ಬಲಗೊಳ್ಳುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಭಾರತದ ನಾರಿ ಶಕ್ತಿಗೆ ಬರೆದ ಪತ್ರದಲ್ಲಿ, ಮುಂದಿನ ಎರಡು ದಿನಗಳಲ್ಲಿ, ಏಪ್ರಿಲ್ ೧೬ ರಂದು, ನಾರಿ ಶಕ್ತಿ ವಂದನ ಅಧಿನಿಯಮಕ್ಕೆ ಸಂಬಂಧಿಸಿದ ಪ್ರಮುಖ ಸಾಂವಿಧಾನಿಕ ತಿದ್ದುಪಡಿಯನ್ನು ಚರ್ಚಿಸಲು ಸಂಸತ್ತು ಮತ್ತೆ ಸಭೆ ಸೇರಲಿದೆ ಎಂದು ಅವರು ಹೇಳಿದರು. ಈ ಶಾಸನವನ್ನು ಸದನದಲ್ಲಿ ಅಂಗೀಕರಿಸಲಾಗುವುದು ಎಂದು ಅವರು ಆಶಿಸಿದರು. ವಿಕಸಿತ ಭಾರತವನ್ನು ನಿರ್ಮಿಸಲು ಕೊಡುಗೆ ನೀಡಲು ಬಲವಾದ ಅವಕಾಶವನ್ನು ಪಡೆದಿದ್ದಕ್ಕಾಗಿ ದೇಶದಾದ್ಯಂತದ ಮಹಿಳೆಯರು ತಮ್ಮ ಸಂತೋಷವನ್ನು ವ್ಯಕ್ತಪಡಿಸುತ್ತಿದ್ದಾರೆ ಎಂದು ಅವರು ಹೇಳಿದರು. ೨೦೨೯ ರ ಲೋಕಸಭಾ ಚುನಾವಣೆಗಳು ಮತ್ತು ವಿವಿಧ ವಿಧಾನಸಭಾ ಚುನಾವಣೆಗಳು ಮಹಿಳಾ ಮೀಸಲಾತಿಯನ್ನು ಸಂಪೂರ್ಣವಾಗಿ ಜಾರಿಗೆ ತಂದರೆ ದೇಶದ ಪ್ರಜಾಪ್ರಭುತ್ವವು ಬಲಗೊಳ್ಳುತ್ತದೆ ಮತ್ತು ಹೆಚ್ಚು ಚೈತನ್ಯಶೀಲವಾಗುತ್ತದೆ ಎಂದು ಪ್ರಧಾನಿ ಹೇಳಿದರು. ದೇಶದ ಶಾಸಕಾಂಗಗಳಲ್ಲಿ ಮಹಿಳೆಯರ ಧ್ವನಿ ಬಲವಾದಾಗ, ಪ್ರಜಾಪ್ರಭುತ್ವದ ಧ್ವನಿಯೇ ಬಲಗೊಳ್ಳುತ್ತದೆ ಎಂದು ಹೇಳಿದ ಅವರು, ಶಾಸಕಾಂಗ ಸಂಸ್ಥೆಗಳಲ್ಲಿ ಮಹಿಳಾ ಪ್ರಾತಿನಿಧ್ಯವನ್ನು ಸಾಧ್ಯವಾದಷ್ಟು ಬೇಗ ಜಾರಿಗೆ ತರುವಂತೆ ಎಲ್ಲರೂ ಒಗ್ಗೂಡಿ ಖಚಿತಪಡಿಸಿಕೊಳ್ಳಬೇಕೆಂದು ಪ್ರಧಾನಿಯವರು ತಿಳಿಸಿದ್ದಾರೆ.

<>><><*><><<>

ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ೧೩೫ನೇ ಜಯಂತಿಯ ಅಂಗವಾಗಿ ಇಂದು ದೇಶಾದ್ಯಂತ ಅವರಿಗೆ ಗೌರವ ನಮನ ಸಲ್ಲಿಸಲಾಗುತ್ತಿದೆ. ಈ ಸಂದರ್ಭವನ್ನು

ಸ್ಮರಿಸಲು ದೇಶದಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅಂಬೇಡ್ಕರ್ ಅವರ ಜನ್ಮದಿನದಂದು ಗುಜರಾತ್‌ನ ಗಾಂಧಿನಗರದ ಲೋಕಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಬಾಬಾಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಕೇಂದ್ರ ಸಚಿವರು ಮತ್ತು ಸಂಸದರು ಅಂಬೇಡ್ಕರ್ ಜಯಂತಿ ಅಂಗವಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶದ ಸಮಸ್ತ ನಾಗರಿಕರಿಗೆ ಶುಭಾಶಯ ಕೋರಿದ್ದಾರೆ. ಡಾ.ಅಂಬೇಡ್ಕರ್ ಅವರು ಶ್ರೇಷ್ಠ ನ್ಯಾಯಶಾಸ್ತ್ರಜ್ಞ, ಅರ್ಥಶಾಸ್ತ್ರಜ್ಞ, ಪ್ರಖರ ಚಿಂತಕ ಮತ್ತು ಸಮಸಮಾಜದ ಪ್ರಬಲ ಪ್ರತಿಪಾದಕರಾಗಿದ್ದರು ಎಂದು ರಾಷ್ಟ್ರಪತಿಗಳು ಸ್ಮರಿಸಿದ್ದಾರೆ. ಸಮಾಜದ ವಂಚಿತ ಮತ್ತು ದುರ್ಬಲ ವರ್ಗಗಳ ಏಳಿಗೆಗಾಗಿ ಅವರು ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ಹೇಳಿರುವ ರಾಷ್ಟ್ರಪತಿಯವರು, ಬಾಬಾಸಾಹೇಬರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ನ್ಯಾಯಸಮ್ಮತ, ಅಂತರ್ಗತ ಮತ್ತು ಪ್ರಗತಿಪರ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವಂತೆ ನಾಗರಿಕರಿಗೆ ಕರೆ ನೀಡಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರ ನಿರ್ಮಾಣದ ನಿಟ್ಟಿನಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ನೀಡಿದ ಕೊಡುಗೆಗಳು ಮತ್ತು ಅವರ ಪ್ರಯತ್ನಗಳು ಸ್ಫೂರ್ತಿದಾಯಕವಾಗಿವೆ. ಅವರ ಜೀವನ ಮತ್ತು ಕಾರ್ಯಗಳು ನ್ಯಾಯಸಮ್ಮತ ಹಾಗೂ ಪ್ರಗತಿಪರ ಸಮಾಜ ನಿರ್ಮಿಸಲು ಇಂದಿನ ತಲೆಮಾರಿಗೆ ದಾರಿದೀಪವಾಗಿವೆ ಎಂದು ತಿಳಿಸಿದ್ದಾರೆ. ಲೋಕಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರು ಕೂಡ ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಗೌರವ ನಮನ ಸಲ್ಲಿಸಿ ಸ್ಮರಿಸಿದ್ದಾರೆ.

<>><><*><><<>

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಪ್ರಚಾರವು ದಿನದಿಂದ ದಿನಕ್ಕೆ ಕಾವು ಪಡೆದುಕೊಳ್ಳುತ್ತಿದ್ದು, ಪ್ರಮುಖ ರಾಜಕೀಯ ಪಕ್ಷಗಳ ನಾಯಕರು ಬಿರುಸಿನ ಪ್ರಚಾರದಲ್ಲಿ ತೊಡಗಿದ್ದಾರೆ. ಭಾರತೀಯ ಜನತಾ ಪಕ್ಷದ ಹಿರಿಯ ನಾಯಕ ಹಾಗೂ ಕೇಂದ್ರ ಸಚಿವ ಅಮಿತ್ ಶಾ, ಇಂದು ರಾಜ್ಯದ ವಿವಿಧೆಡೆ ಚುನಾವಣಾ ರ್‍ಯಾಲಿಗಳನ್ನು ನಡೆಸಲಿದ್ದಾರೆ. ಉತ್ತರ

ದಿನಾಜ್‌ಪುರದ ಕಾಲಿಯಾಗಂಜ್‌ನಲ್ಲಿ ಬೃಹತ್ ರೋಡ್ ಶೋ ನಡೆಸಲಿರುವ ಅವರು, ನಂತರ ದಕ್ಷಿಣ ದಿನಾಜ್‌ಪುರ ಜಿಲ್ಲೆಯ ಗಂಗಾರಾಂಪುರದಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ ಮಾಲ್ಡಾದ ಮಾಣಿಕ್ ಚಕ್ ಮತ್ತು ಗಾಜೋಲ್‌ನಲ್ಲಿ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಮತಯಾಚಿಸಲಿದ್ದಾರೆ. ಮತ್ತೊಂದೆಡೆ, ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಅವರೂ ಸಹ ಇಂದು ರಾಜ್ಯದಾದ್ಯಂತ ಸರಣಿ ಪ್ರಚಾರ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಪಿಂಗ್ಲಾ ಮತ್ತು ಸಬಂಗ್‌ಗಳಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಸಾರ್ವಜನಿಕ ಸಭೆಗಳನ್ನು ಉದ್ದೇಶಿಸಿ ಅವರು ಮಾತನಾಡಲಿದ್ದಾರೆ. ನಂತರ ತಮ್ಲುಕ್ ಮತ್ತು ಜಗತ್‌ಬಲ್ಲಭಪುರದಲ್ಲಿ ಬೃಹತ್ ರ್‍ಯಾಲಿಗಳನ್ನು ನಡೆಸಿ ಮತಯಾಚಿಸಲಿದ್ದಾರೆ.

<>><><*><><<>

ಬೈಸಾಕಿ, ವಿಷು, ಬೋಹಾಗ್ ಬಿಹು, ಪೊಯ್ಲಾ ಬೊಯ್‌ಶಾಕ್, ಮೆಶಾದಿ, ವೈಶಾಕಾದಿ ಮತ್ತು ಪುತಂಡು ಹಬ್ಬಗಳ ಶುಭ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿಮುರ್ಮು ಮತ್ತು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ದೇಶ ವಿದೇಶಗಳಲ್ಲಿ ನೆಲೆಸಿರುವ ಭಾರತೀಯ ನಾಗರಿಕರಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ರಾಷ್ಟ್ರಪತಿ, ಸುಗ್ಗಿಯ ಕಾಲವನ್ನು ಸಂಭ್ರಮಿಸಲು ಈ ಹಬ್ಬಗಳನ್ನು ದೇಶಾದ್ಯಂತ ವಿವಿಧ ಹೆಸರುಗಳಲ್ಲಿ ಆಚರಿಸಲಾಗುತ್ತಿದೆ. ಈ ಹಬ್ಬಗಳ ಮೂಲಕ ನಾಗರಿಕರು ಭೂಮಿತಾಯಿ ಮತ್ತು ಅನ್ನದಾತ ರೈತರಿಗೆ ತಮ್ಮ ಕೃತಜ್ಞತೆ ಸಲ್ಲಿಸುತ್ತಾರೆ. ಈ ಹಬ್ಬಗಳ ಮೂಲಕ ನಮ್ಮ ದೇಶದ ಶ್ರೀಮಂತ ಪರಂಪರೆ ಮತ್ತು ಸಂಪ್ರದಾಯ ಅಭಿವ್ಯಕ್ತಗೊಳ್ಳುತ್ತದೆ ಎಂದು ತಿಳಿಸಿದ್ದಾರೆ. ಹಬ್ಬದ ಅಂಗವಾಗಿ ಉಪರಾಷ್ಟ್ರಪತಿ ಈ ಹಬ್ಬಗಳು ಹೊಸ ಆರಂಭ, ಸುಗ್ಗಿಯ ಸಂಭ್ರಮ ಮತ್ತು ಮನುಷ್ಯ, ಪ್ರಕೃತಿ ಹಾಗೂ ಸಂಪ್ರದಾಯಗಳ ನಡುವಿನ ಅವಿನಾಭಾವ ಸಂಬಂಧವನ್ನು ಸಾರುತ್ತವೆ ಎಂದು ತಿಳಿಸಿದ್ದಾರೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರಿಂದು ಉಪರಾಷ್ಟ್ರಪತಿ ಭವನದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಭೇಟಿಯಾಗಿ ತಮಿಳು ಹೊಸವರ್ಷವಾದ ಪುತಂಡು ಹಾಗೂ ಬೈಸಾಕಿ ಹಬ್ಬದ ಅಂಗವಾಗಿ ಶುಭಾಶಯ ಕೋರಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಉಪರಾಷ್ಟ್ರಪತಿ, ತಮಿಳು ಪುತಂಡು ಹಬ್ಬವು ಪೂರ್ವಜರ ಜ್ಞಾನವನ್ನು ಹೇಗೆ

ಪ್ರತಿಬಿಂಬಿಸುತ್ತದೆ ಮತ್ತು ಸಂಪ್ರದಾಯ, ಕುಟುಂಬ ಆಧ್ಯಾತ್ಮಿಕತೆ ಮತ್ತು ಶಿಸ್ತುಬದ್ಧ ಜೀವನ ವಿಧಾನವನ್ನು ಹೇಗೆ ಒಂದು ಗೂಡಿಸುತ್ತದೆ ಎಂಬ ಬಗ್ಗೆ ಪ್ರಧಾನಿಯವರೊಂದಿಗೆ ಚರ್ಚಿಸುವುದಾಗಿ ತಿಳಿಸಿದ್ದಾರೆ.

<>><><*><><<>

ಕೆನಡಾ ಪ್ರಧಾನಿ ಮಾರ್ಕ್‌ಕಾರ್ನಿ ಅವರು, ಇತ್ತೀಚಿನ ಉಪಚುನಾವಣೆಯಲ್ಲಿ ಭರ್ಜರಿ ಜಯಗಳಿಸುವ ಮೂಲಕ ಸಂಸತ್ತಿನಲ್ಲಿ ಸ್ಪಷ್ಟ ಬಹುಮತ ಸಾಧಿಸಿದ್ದಾರೆ. ಈ ಯಶಸ್ಸಿನಿಂದಾಗಿ ಲಿಬರಲ್ ಪಾರ್ಟಿ ಈಗ ಇತರ ಯಾವುದೇ ಪಕ್ಷಗಳ ಬೆಂಬಲವಿಲ್ಲದೇ ಸ್ವತಂತ್ರವಾಗಿ ಕಾನೂನುಗಳನ್ನು ಅಂಗೀಕರಿಸುವ ಶಕ್ತಿ ಪಡೆದುಕೊಂಡಿದೆ. ಕೆನಡಾ ಸಂಸತ್ತಿನ ಮೂರು ಖಾಲಿ ಸ್ಥಾನಗಳಿಗೆ ನಡೆದ ಮತದಾನದಲ್ಲಿ ಲಿಬರಲ್ ಪಾರ್ಟಿ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ. ಈ ಗೆಲುವಿನ ಜೊತೆಗೆ ಕನ್ಸರ್ವೇಟಿವ್ ಪಕ್ಷವು ಸೇರಿದಂತೆ ಪ್ರತಿಪಕ್ಷಗಳ ಐವರು ಸಂಸದರು ಪಕ್ಷಾಂತರ ಮಾಡಿ ಸರ್ಕಾರವನ್ನು ಬೆಂಬಲಿಸಿರುವುದು ಮಾರ್ಕ್‌ಕಾರ್ನಿ ಅವರ ನೇತೃತ್ವದ ಸರ್ಕಾರ ಬಹುಮತದ ಗಡಿ ದಾಟಲು ಸಹಕಾರಿಯಾಗಿದೆ. ಈ ರಾಜಕೀಯ ಬೆಳವಣಿಗೆಯಿಂದಾಗಿ ಮಾರ್ಕ್‌ಕಾರ್ನಿ ನೇತೃತ್ವದ ಸರ್ಕಾರ ೨೦೨೯ರವರೆಗೆ ಅಧಿಕಾರದಲ್ಲಿ ಮುಂದುವರೆಯುವ ಸಾಧ್ಯತೆಯಿದೆ.

<>><><*><><<>

ಇರಾನ್ ಬಂದರುಗಳ ಮೇಲೆ ಅಮೆರಿಕ ನೌಕಾ ದಿಗ್ಬಂಧನ ವಿಧಿಸಿರುವ ವರದಿಗಳನ್ನು ವಿಶ್ವಸಂಸ್ಥೆಗೆ ಇರಾನ್ ರಾಯಭಾರಿ ಅಮೀರ್ ಸಯಿದ್ ಇರವಾನಿ ತೀವ್ರವಾಗಿ ಖಂಡಿಸಿದ್ದಾರೆ. ಅಮೆರಿಕದ ಈ ಕ್ರಮ ಇರಾನ್‌ನ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಗಂಭೀರ ಉಲ್ಲಂಘನೆಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಮೆರಿಕದ ಈ ನಡೆ ಕಾನೂನು ಬಾಹಿರ ಆಕ್ರಮಣಕಾರಿ ಕೃತ್ಯವಾಗಿದ್ದು, ಪ್ರಾದೇಶಿಕ ಮತ್ತು ಜಾಗತಿಕ ಶಾಂತಿಗೆ ಅಡ್ಡಿಯಾಗಲಿದೆ ಎಂದು ಬಣ್ಣಿಸಿದ್ದಾರೆ. ಪರಿಸ್ಥಿತಿ ಗಂಭೀರತೆ ಮನಗಂಡು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು ತಕ್ಷಣವೇ ಮಧ್ಯ ಪ್ರವೇಶಿಸಬೇಕು ಎಂದು ಅಮೀರ್ ಇರವಾನಿ ಆಗ್ರಹಿಸಿದ್ದಾರೆ.

<>><><*><><<>

ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ತಂಡ ೫೭ ರನ್‌ಗಳ ಗೆಲುವು ದಾಖಲಿಸಿದೆ.

<>><><*><><<>

ಫ್ಲೋರಿಡಾದ ನೇಪಲ್ಸ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್ ಪಿಕಲ್‌ಬಾಲ್ ಚಾಂಪಿಯನ್‌ಶಿಪ್ ೨೦೨೬ರಲ್ಲಿ ಭಾರತದ ಧೀರೇನ್ ಪಟೇಲ್ ಮತ್ತು ಅರ್ಜುನ್ ಸಿಂಗ್ ಅವರು ಸ್ವರ್ಣ ಪದಕ ಗೆಲ್ಲುವ ಮೂಲಕ ಐತಿಹಾಸಿಕ ಸಾಧನೆ ಮಾಡಿದ್ದಾರೆ. ಇದರೊಂದಿಗೆ ಈ ಪ್ರತಿಷ್ಠಿತ ಟೂರ್ನಿಯಲ್ಲಿ ಭಾರತದ ಒಟ್ಟು ಚಿನ್ನದ ಪದಕಗಳ ಸಂಖ್ಯೆ ೩ಕ್ಕೆ ಏರಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>